ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 19–11–2020

# ಮಧ್ಯಮ ಆಮಂತ್ರಣ

**1. ರಾಜ್ಯ ಪೊಲೀಸ್ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಮುಖ್ಯಮಂತ್ರಿಗಳ ಪದಕ ಪ್ರದಾನ ಸಮಾರಂಭ :**

ಪದಕ ಪ್ರದಾನ : ಬಿ. ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು

ಅಧ್ಯಕ್ಷತೆ : ಬಸವರಾಜ ಬೊಮ್ಮಾಯಿ, ಗೃಹ ಸಚಿವರು.

ದಿನಾಂಕ : 20–11–2020, ಶುಕ್ರವಾರ, ಸಮಯ : ಬೆಳಿಗ್ಗೆ 10–30

ಸ್ಥಳ : ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು.

**2. ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಸಮಾರೋಪ ಹಾಗೂ ಸಿಬ್ಬಂದಿ ಸೇವಾ ಪುರಸ್ಕಾರ ಪ್ರದಾನ ಸಮಾರಂಭ**

ಉದ್ಘಾಟನೆ : ಬಿ.ಎಸ್. ಯಡಿಯೂರಪ್ಪ, ಮುಖ್ಯ ಮಂತ್ರಿಗಳು

ಅಧ್ಯಕ್ಷತೆ : ಎಸ್. ಸುರೇಶ್ ಕುಮಾರ್, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

ದಿನಾಂಕ : 20–11–2020 (ಶುಕ್ರವಾರ) ಸಮಯ: ಬೆಳಿಗ್ಗೆ 10–00 ಗಂಟೆಗೆ

ಸ್ಥಳ : ರಾಜರಾಜೇಶ್ವರಿ ಕಲ್ಯಾಣ ಮಂಟಪ, ಆರ್.ಟಿ.ಓ ಕಚೇರಿ ಮುಂಭಾಗ, ಡಾ.ರಾಜ್‌ಕುಮಾರ್ ರಸ್ತೆ, ರಾಜಾಜಿನಗರ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

## ನವೆಂಬರ್ 20 ರಂದು
## ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಸಮಾರೋಪ ಸಮಾರಂಭ

**ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ):** ಬೆಂಗಳೂರು ಸಾರ್ವಜನಿಕ ಗ್ರಂಥಾಲಯ ಇಲಾಖೆಯು ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಸಮಾರೋಪ ಹಾಗೂ ಸಿಬ್ಬಂದಿ ಸೇವಾ ಪುರಸ್ಕಾರ ಪ್ರದಾನ ಸಮಾರಂಭವನ್ನು ನವೆಂಬರ್ 20 ರಂದು ಬೆಳಿಗ್ಗೆ 10 ಗಂಟೆಗೆ ರಾಜರಾಜೇಶ್ವರಿ ಕಲ್ಯಾಣ ಮಂಟಪ, ಆರ್.ಟಿ.ಓ ಕಚೇರಿ ಮುಂಭಾಗ, ಡಾ.ರಾಜ್‌ಕುಮಾರ್ ರಸ್ತೆ, ರಾಜಾಜಿನಗರ ಬೆಂಗಳೂರು ಇಲ್ಲಿ ಹಮ್ಮಿಕೊಳ್ಳಲಾಗಿದೆ.

ಸಮಾರಂಭದ ಉದ್ಘಾಟನೆಯನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಪುಸ್ತಕ ಪ್ರದರ್ಶನದ ಉದ್ಘಾಟನೆಯನ್ನು ಹಣಕಾಸು ಹಾಗೂ ಕಾರ್ಪೋರೇಟ್ ವ್ಯವಹಾರಗಳ ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್ ನೆರವೇರಿಸುವರು. ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವ ಎಸ್. ಸುರೇಶ್ ಕುಮಾರ್ ಅಧ್ಯಕ್ಷತೆ ಹಾಗೂ ಪ್ರಶಸ್ತಿ ಪ್ರದಾನವನ್ನು ಮಾಡುವರು.

ಸಾರ್ವಜನಿಕ ಗ್ರಂಥಾಲಯ ಇಲಾಖೆಯ ನೂತನ ವೆಬ್‌ಸೈಟ್‌ಗೆ ರಾಸಾಯನಿಕ ಮತ್ತು ರಸಗೊಬ್ಬರಗಳ ಕೇಂದ್ರ ಸಚಿವರಾದ ಡಿ.ವಿ.ಸದಾನಂದಗೌಡ ಹಾಗ ನಗರತ ಕೇಂದ್ರ ಗ್ರಂಥಾಲಯ ಉತ್ತರ ವಲಯದ ವೆಬ್‌ಸೈಟ್‌ಗೆ ಉಪ ಮುಖ್ಯಮಂತ್ರಿ ಹಾಗೂ ಲೋಕೋಪಯೋಗಿ ಸಚಿವ ಗೋವಿಂದ ಎಂ ಕಾರಜೋಳ, ನಂದಿನ ಬಡಾವಣೆ ಶಾಖಾ ಗ್ರಂಥಾಲಯದ ಡಿಜಿಟಲ್ ಗ್ರಂಥಾಲಯಕ್ಕೆ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ: ಸಿ.ಎನ್.ಅಶ್ವಥ್ ನಾರಾಯಣ ಚಾಲನೆ ನೀಡುವರು.

# ಶೋಕ ಸಂದೇಶ

**ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ):**

ಡಾ. ಟಿ.ಬಿ.ಸೊಲಬಕ್ಕನರ್‌ಕಲಾಲೋಕದಧೃವತಾರೆ,ಚಿತ್ರಕಲೆ, ಜಾನಪದ, ಬಯಲಾಟ, ಶಿಲ್ಪಕಲಾಕ್ಷೇತ್ರಗಳಲ್ಲಿ ಕರ್ನಾಟಕ ಮಾತ್ರವಲ್ಲದೇ ಇಡೀ ದೇಶದಲ್ಲಿಯೇ ಹೊಸಪರಿಕಲ್ಪನೆ ಕೊಟ್ಟವರು.

ಹಾವೇರಿ ಜಿಲ್ಲೆಯ ಗೊಟಗೋಡಿಯಲ್ಲಿ ಜನಪದ ಕ್ಷೇತ್ರಕ್ಕೆ ಸಂಬಂಧಿಸಿದ ಕಲಾಕೃತಿಗಳನ್ನು ರಾಕ್ಗಾರ್ಡನ್ನಿರ್ಮಿಸಿದೇವಿದೇಶಗಳಲ್ಲೂಖ್ಯಾತಿಗಳಿಸಿದವರು.ಕಲಾಲೋಕದಿಂದತಾವಷ್ಟೇಅಲ್ಲ ಸಾವಿರಾರು ಕಲಾವಿದರನ್ನು ಬೆಳಕಿಗೆ ತಂದು ಬದುಕುಕಟ್ಟಿಕೊಟ್ಟವರು.

ಮಹಾತ್ಮಾಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿಸಂಸ್ಥೆ ಶ್ರೀರಾಮಪುರ ಜಕ್ಕೂರಿನಲ್ಲಿ ಪಾರಂಪರಿಕ ಗ್ರಾಮ ನಿರ್ಮಿಸಿ ರಾಜ್ಯದ ಸರ್ವರ ಮೆಚ್ಚುಗೆಗೆ ಪಾತ್ರರಾದವರು.

ಕರ್ನಾಟಕದ ಬಯಲಾಟ ಅಕಾಡೆಮಿ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದ ಇವರ ನಿಧನದಿಂದಾಗಿ ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ. ಇಂತಹ ಮಹಾನ್ವ್ಯಕ್ತಿಯ ಅಗಲಿಕೆಯ ನೋವನ್ನು ಭರಿಸುವ ಶಕ್ತಿ ಅವರ ಕುಟುಂಬಕ್ಕೆ ನೀಡಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇವೆ ಎಂದು ಜಾನಪದ ಅಕಾಡೆಮಿ ತೀವ್ರ ಶೋಕ್ ವ್ಯಕ್ತಪಡಿಸಿದೆ.

## ಪ್ರತಿಜ್ಞಾ ವಿಧಿ ಸ್ವೀಕಾರ

**ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ):**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಇಂದು ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನ ಕಾರ್ಯಕ್ರಮ ಆಯೋಜಿಸಲಾಗಿತ್ತು. ಇಲಾಖೆಯ ಜಂಟಿ ನಿರ್ದೇಶಕ ಡಿ. ಪಿ. ಮುರಳೀಧರ್ ಅವರು ಅಧಿಕಾರಿ ಹಾಗೂ ನೌಕರರುಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಛಾಯಾಚಿತ್ರ ಲಗತ್ತಿಸಿದೆ )

# ಭಾವಪೂರ್ಣ ಶ್ರದ್ಧಾಂಜಲಿ

## ಶ್ರೀಯುತ ಕೆ ಆರ್ ಪ್ರಕಾಶ್

ರಂಗಕರ್ಮಿ ಹಾಗೂ ಸದಸ್ಯರು, ಕರ್ನಾಟಕ ನಾಟಕ ಅಕಾಡೆಮಿ



9-5-1970 ರಂದು ಜನಿಸಿದ ಇವರ ತಂದೆ ತಾಯಿ ಶ್ರೀಯುತ ರಾಮಚಂದ್ರ ಹೆಗಡೆ ಮತ್ತು ಶ್ರೀಮತಿ ಸರಸ್ವತಿ ಹೆಗಡೆ, ಕಳೆದ 33 ವರ್ಷಗಳಿಂದ ರಂಗಭೂಮಿಯಲ್ಲಿ ಸೇವೆ ಸಲ್ಲಿಸಿದ್ದಾರೆ. ನಿಸರ್ಗರಂಗಭೂಮಿಯ ಪರಿಕಲ್ಪನೆ ಇವರ ಹೊಸ ಆವಿಷ್ಕಾರವಾಗಿದೆ. ರಂಗಭೂಮಿಯಲ್ಲಿ 18 ವಿಶಿಷ್ಟ ರಂಗಪ್ರಯೋಗಗಳನ್ನು ಮಾಡಿದ್ದಾರೆ. 1029 ನಾಟಕಗಳಲ್ಲಿ ಅಭಿನಯಿಸಿದ್ದು 182 ನಾಟಕಗಳನ್ನು ನಿರ್ದೇಶಿಸಿದ್ದಾರೆ. 52 ರಂಗತರಬೇತಿ ಶಿಬಿರಗಳನ್ನು ನಡೆಸಿದ್ದು. 642 ಬೀದಿ ನಾಟಕಗಳಲ್ಲಿ ಅಭಿನಯಿಸಿದ್ದಾರೆ. ಏಡ್ಸಾಯಣ, ಸಂಸಾರದಲ್ಲಿ ಸನಿದಪ, ಮಹಾರಾತ್ರಿ, ಶಾಪ, ಮುಂತಾದ ವಿಶಿಷ್ಟ ರಂಗಪ್ರಯೋಗಗಳನ್ನು ನಡೆಸಿದ್ದಾರೆ. ವೃತ್ತಿಕಂಪನಿ ನಾಟಕಗಳಲ್ಲಿ ನಟಿಸಿದ್ದಾರೆ. ಹವ್ಯಕರ ಇಂದಿನ ಸ್ಥಿತಿ ಆಧರಿಸಿ "ಯಂಗ ಊದಶಂಕ ಊದವೆಯಾ" ಕೃತಿಯನ್ನು ರಚಿಸಿ, ನಟಿಸಿ, ನಿರ್ದೇಶಿಸಿದ್ದಾರೆ. ಕಳೆದ 1 ವರ್ಷದಿಂದ ಕರ್ನಾಟಕ ನಾಟಕ ಅಕಾಡೆಮಿಯ ಸಕ್ರಿಯ ಸದಸ್ಯರಾಗಿ ಸೇವೆಸಲ್ಲಿಸುತ್ತಿದ್ದರು. ಇವರು ನೆನ್ನೆ ರಾತ್ರಿ 11.17 ಗಂಟೆಗೆ ವಿಧಿವಶರಾಗಿದ್ದು, ಕರ್ನಾಟಕ ನಾಟಕ ಅಕಾಡೆಮಿಯ ಅಧ್ಯಕ್ಷರು, ಸರ್ವ ಸದಸ್ಯರು, ರಿಜಿಸ್ಟ್ರಾರ್ ಮತ್ತು ಸಿಬ್ಬಂದಿ ವರ್ಗ ತೀವ್ರ ಸಂತಾಪವನ್ನು ವ್ಯಕ್ತಪಡಿಸಿ, ಭಾವಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಿರುತ್ತಾರೆ.

ದಿನಾಂಕ 19-11-2020 ರಂದು ನಡೆಯಬೇಕಿದ್ದ ನಾಟಕ ಅಕಾಡೆಮಿಯ ಸ್ಥಾಯಿ ಸಮಿತಿ ಸಭೆಯನ್ನು ಇವರ ಗೌರವಾರ್ಥ ಮುಂದೂಡಲು ಸಭೆಯಲ್ಲಿ ತೀರ್ಮಾನಿಸಲಾಯಿತು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಜೀವ ವೈವಿಧ್ಯ ಮಂಡಳಿ ಆಶ್ರಯದಲ್ಲಿ ಔಷಧಿ ಮೂಲಿಕಾ ಸಂಪತ್ತಿನ ಸಂರಕ್ಷಣೆ

**ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ):**

ಕರ್ನಾಟಕದ ಎಲ್ಲಾ ಪ್ರದೇಶಗಳ ಅರಣ್ಯದಲ್ಲಿರುವ ಔಷಧಿ ಸದಸ್ಯ ಸಂಪನ್ಮೂಲಗಳ ಲಭ್ಯತೆ ಕುರಿತು ಸಮಗ್ರ ಅಧ್ಯಯನವೊಂದನ್ನು ಜೀವ ವೈವಿಧ್ಯ ಮಂಡಳಿಯು ಇತ್ತೀಚೆಗೆ ಪೂರೈಸಿದೆ.

" Assessment of population status and removal of bio-resources in forest with special emphasis on medical plants in Karnataka" ಎಂಬ ವ್ಯಾಪಕ ಗಣತಿಯಾಧಾರಿತ ಈ ಅಧ್ಯಯನವನ್ನು ಕರ್ನಾಟಕ ಜೀವವೈವಿಧ್ಯ ಮಂಡಳಿಯು ರಾಷ್ಟ್ರೀಯ ಔಷಧಿ ಮೂಲಿಕಾ ಪ್ರಾಧಿಕಾರದ ಅನುದಾನದೊಂದಿಗೆ ಕರ್ನಾಟಕ ಔಷಧಿಮೂಲಿಕಾ ಮಂಡಳಿ ಹಾಗೂ ಅರಣ್ಯ ಇಲಾಖೆಯ ಜೋತೆ ಸೇರಿ ಕೈಗೊಂಡಿತ್ತು. ಸಸ್ಯ ಸಂಪತ್ತಿನ ಸಂರಕ್ಷಣೆ ದೃಷ್ಟಿಯಿಂದ ಈ ಪ್ರಯತ್ನವು ರಾಷ್ಟ್ರಮಟ್ಟದ ಮಹತ್ವ ಹೊಂದಿದೆ.

ಈ ಅಧ್ಯಯನವನ್ನು ಐದು ವರ್ಷಗಳ ಕಾಲ ನಡೆಸಲಾಗಿದ್ದು, ನಾಡಿನ ಎಲ್ಲೆಡೆ ಕಾಡಿನ ಪ್ರದೇಶಗಳಲ್ಲಿ ಲಭ್ಯವಿರುವ ಎಲ್ಲಾ ಬಗೆಯ ಮರ, ಪೊದೆ ಹಾಗೂ ಬಳ್ಳಿಗಳ ಪ್ರಬೇಧಗಳ ವೈವಿಧ್ಯತೆ ಹಾಗೂ ಈ ಸಂಪನ್ಮೂಲಗಳ ಹರಿವಿನ ಸಂರಕ್ಷಣೆ ಇದರ ಮುಖ್ಯ ಉದ್ದೇಶವಾಗಿತ್ತು .

ರಾಜ್ಯದ ಅರಣ್ಯ ಪ್ರದೇಶದಲ್ಲಿ ಸುಮಾರು 12,820 ಕಿ.ಮೀ ಗಳಷ್ಟು ದೂರ ಸಮೀಕ್ಷಾರೇಖೆ ಗುರುತಿಸಿ, ಅವುಗಳ ಗುಂಟ ಸಾಗಿ ಈ ದಾಖಲಾತಿಯನ್ನು ಮಾಡಲಾಗಿದ್ದು, ದೇಶದಲ್ಲಿ ಈ ವರೆಗೆ ಕೈಗೊಂಡ ಈ ಬಗೆಯ ವ್ಯಾಪಕ ವೈಜ್ಞಾನಿಕ ಸಮೀಕ್ಷೆಗಳಲಲ್ಲಿ ಇದೊಂದು ಅನನ್ಯ ಪ್ರಮುಖ ಅಧ್ಯಯನವಾಗಿದೆ.

ಹಿರಿಯ ಅರಣ್ಯ ಅಧಿಕಾರಿಗಳು, ಸಸ್ಯ ಶಾಸ್ತ್ರಜ್ಞರು ಹಾಗೂ ನುರಿತ ಕ್ಷೇತ್ರ ತಜ್ಞರ ಸಹಯೋಗದಲಿ ಈ ಅಧ್ಯಯನ ನಡೆಸಲಾಗಿದ್ದು, ಇದೀಗ 30 ಜಿಲ್ಲೆಗಳಲ್ಲಿ (40 ಅರಣ್ಯ ವಿಭಾಗಗಳ) ಪ್ರಕಟಗೊಂಡಿರುವ ಈ ವರದಿಗಳನ್ನು ನವೆಂಬರ್ 21 ರಂದು ಅರಣ್ಯ ಭವನದಲ್ಲಿ ಹಮ್ಮಿಕೊಂಡಿರುವ ಕಾರ್ಯಾಗಾರದಲ್ಲಿ ಬಿಡುಗಡೆ ಮಾಡಲಾಗುತ್ತಿದೆ.

## ನವೆಂಬರ್ 27 ರಂದು ಔಷಧ ಪರಿವೀಕ್ಷಕರ ಹುದ್ದೆಗಳ ಸಂದರ್ಶನ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ): ಕರ್ನಾಟಕ ಲೋಕಸೇವಾ ಆಯೋಗವು ಮಾರ್ಚ್ 23, 2018 ರಲ್ಲಿ ಅಧಿಸೂಚಿಸಿರುವ ಔಷಧ ನಿಯಂತ್ರಣ ಇಲಾಖೆಯಲ್ಲಿನ ಔಷಧ ಪರಿವೀಕ್ಷಕರ 68+15 (ಹೈಕ)

ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ನವೆಂಬರ್ 27 ರಂದು ಸಂದರ್ಶನವನ್ನು ಆಯೋಗದ ಕೇಂದ್ರ ಕಛೇರಿ, ಬೆಂಗಳೂರು ಇಲ್ಲಿ ನಡೆಸಲಾಗುವುದು.

ಅಭ್ಯರ್ಥಿಗಳಿಗೆ ಸಂದರ್ಶನ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ "http://kpsc.kar.nic.in/Eligibility List" ಗಳಲ್ಲಿ ಪ್ರಕಟಿಸಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ): ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚಿಸಿದ್ದ ಬೆಂಗಳೂರು ನಗರದ ಸಿವಿಲ್ ನ್ಯಾಯಾಲಯ, ಲಘು ವ್ಯವಹಾರಗಳ ನ್ಯಾಯಾಲಯ ಮತ್ತು ರಾಜ್ಯದ ವಿವಿಧ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳಲ್ಲಿನ ಉಳಿಕೆ ಮೂಲ ವೃಂದದ –219 ಮತ್ತು ಹೈದ್ರಾಬಾದ್ ಕರ್ನಾಟಕ ವೃಂದದ –50 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ.

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ): ಕರ್ನಾಟಕ ಲೋಕಸೇವಾ ಆಯೋಗವು ಮಾರ್ಚ್ 23, 2018 ರಲ್ಲಿ ಅಧಿಸೂಚಿಸಿರುವ ಔಷಧ ನಿಯಂತ್ರಣ ಇಲಾಖೆಯಲ್ಲಿನ ಔಷಧ ಪರಿವೀಕ್ಷಕರ 68+15 (ಹೈಕ) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ನವೆಂಬರ್ 27 ರಂದು ಸಂದರ್ಶನವನ್ನು ಆಯೋಗದ ಕೇಂದ್ರ ಕಛೇರಿ, ಬೆಂಗಳೂರು ಇಲ್ಲಿ ನಡೆಸಲಾಗುವುದು.

ಅಭ್ಯರ್ಥಿಗಳಿಗೆ ಸಂದರ್ಶನ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ "http://kpsc.kar.nic.in.Lists-Provisional Selection List" ಗಳಲ್ಲಿ ಪ್ರಕಟಿಸಿದೆ ಎಂದು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ.

## <u>ಪ್ರಮಾಣ ವಚನ ಸ್ವೀಕಾರ</u>

**ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ):**

**ಅಕ್ಟೋಬರ್ 28 ರಂದು ನಡೆದ ಚುನಾವಣೆಯಲ್ಲಿ ವಿಧಾನ ಪರಿಷತ್‌ಗೆ ಆಯ್ಕೆಯಾದ ನೂತನ 4 ಸದಸ್ಯರು ಪ್ರಮಾಣ ವಚನ ಸ್ವೀಕರಿಸಿದರು.**

**ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ ಸರಳ ಸಮಾರಂಭದಲ್ಲಿ ವಿಧಾನ ಪರಿಷತ್ ಸಭಾಪತಿ ಕೆ. ಪ್ರತಾಪ್‌ಚಂದ್ರ ಶೆಟ್ಟಿ ಪ್ರಮಾಣ ವಚನ ಬೋಧಿಸಿದರು.**

**ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ಪುಟ್ಟಣ್ಣ, ಈಶಾನ್ಯ ಕ್ಷೇತ್ರದಿಮದ ಶಶೀಲ್ ಜಿ. ನಮೋಶಿ, ಪಶ್ಚಿಮ ಪದವೀಧರರ ಕ್ಷೇತ್ರದಿಂದ ಎಸ್.ವಿ. ಸಂಕನೂರ ಹಾಗೂ ಆಗ್ನೇಯ ಪದವೀಧರರ ಕ್ಷೇತ್ರದಿಂದ ಚಿದಾನಂದಗೌಡ ಇವರುಗಳು ವಿಧಾನ ಪರಿಷತ್‌ಗೆ ಚುನಾಯಿತರಾದ ನೂತನ ಸದಸ್ಯರು.  ಎಲ್ಲರೂ ದೇವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ್ದು ವಿಶೇಷವಾಗಿತ್ತು.**

**ಈ ಸಂದರ್ಭದಲ್ಲಿ ಸಚಿವರಾದ ಜಗದೀಶ್ ಶೆಟ್ಟರ್, ಕೋಟ ಶ್ರೀನಿವಾಸ ಪೂಜಾರಿ, ವಿಧಾನ ಪರಿಷತ್ ಸದಸ್ಯರಾದ ಎ.ವೈ. ನಾರಾಯಣಸ್ವಾಮಿ ಹಾಗೂ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.**

## ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 19 (ಕರ್ನಾಟಕ ಸರ್ಕಾರ):

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2020-21ನೇ ಸಾಲಿಗೆ "ಇ-ವಾಣಿಜ್ಯ ಸಂಸ್ಥೆಗಳಾದ Zomato, Swiggy, Uber ets, Amazon, ಮೊದಲಾದ ಸಂಸ್ಥೆಗಳಲ್ಲಿ ಉದ್ಯೋಗ ಪಡೆದು, ಮನೆಬಾಗಿಲಿಗೆ ಉತ್ಪನ್ನ ತಲುಪಿಸುತ್ತಿರುವ ಹಿಂದುಳಿದ ವರ್ಗಗಳಿಗೆ ಸೇರಿದ ಪ್ರವರ್ಗ-1, ಪ್ರವರ್ಗ-2ಎ,3ಎ ಮತ್ತು 3ಬಿಗೆ ಸೇರಿದ (ವಿಶ್ವಕರ್ಮ, ಉಪ್ಪಾರ, ಅಂಬಿಗ, ಮಡಿವಾಳ, ಸವಿತಾ, ಅಲೆಮಾರಿ/ಅರೆ ಅಲೆಮಾರಿ ಜನಾಂಗದವರು ಹಾಗೂ ಮತೀಯ ಅಲ್ಪಸಂಖ್ಯಾತರನ್ನು ಹೊರತು ಪಡಿಸಿ) ಯುವಕರಿಗೆ ಬೈಕ್ ಕೊಂಡುಕೊಳ್ಳಲು ನಿಗಮದಿಂದ ರೂ.25,000/-ಗಳ ಸಹಾಯಧನ" ಹಾಗೂ ಉಳಿಕೆ ಮೊತ್ತ ಬ್ಯಾಂಕ್ ಅಥವಾ ಆರ್ಥಿಕ ಸಂಸ್ಥೆಗಳ ಮೂಲಕ ಸಾಲ ಪಡೆಯುವುದು. ಈ ಸೌಲಭ್ಯವನ್ನು ಪಡೆಯ ಬಯಸುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಸೌಲಭ್ಯವನ್ನು ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯವನ್ನು ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಮೇಲ್ಕಂಡ ಯೋಜನೆಯಲ್ಲಿ ಸೌಲಭ್ಯವನ್ನು ಪಡೆಯಲು ಇಚ್ಛಿಸುವ, ಹಿಂದುಳಿದ ವರ್ಗದ ಫಲಾಪೇಕ್ಷಿಗಳು ಉಚಿತವಾಗಿ ಅರ್ಜಿ ನಮೂನೆಯನ್ನು ನಿಗಮದ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ(ನಿ) ಬೆಂಗಳೂರು ಉತ್ತರ ಜಿಲ್ಲೆ, ಸಂಖ್ಯೆ. 324/62, ಸರ್ವಶೀಲಾ ಕಾಂಪ್ಲೆಕ್ಸ್, ಬಳ್ಳಾರಿ ಮೈನ್ ರೋಡ್, ಗಂಗಾನಗರ, ಬೆಂಗಳೂರು–560032. ವಿಳಾಸದ ಜಿಲ್ಲಾ ಕಛೇರಿಯಲ್ಲಿ ಪಡೆಯಬಹುದು

ಅರ್ಜಿಗಳನ್ನು ಸಲ್ಲಿಸುವಾಗ ಅರ್ಜಿದಾರರು ಅರ್ಜಿ ನಮೂನೆಯಲ್ಲಿ ಸೂಚಿಸಿರುವ ಅಗತ್ಯ ದಾಖಲಾತಿಗಳೊಂದಿಗೆ ನಿಗಮದ ವೆಬ್‌ಸೈಟ್ www.dbcdc.karnataka.gov.in ಮೂಲಕ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗದೇ ಇದ್ದಲ್ಲಿ, ಅರ್ಜಿ ನಮೂನೆಯಲ್ಲಿ ಸೂಚಿಸಿರುವ ಅಗತ್ಯ ದಾಖಲಾತಿಗಳೊಂದಿಗೆ ಭರ್ತಿ ಮಾಡಿ ಮೇಲ್ಕಂಡ ನಿಗಮದ ಜಿಲ್ಲಾ ಕಛೇರಿಗೆ 19ನೇ ಡಿಸಂಬರ್ 2020 ರೊಳಗೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಯೋಜನೆಗಳ ಬಗ್ಗೆ ಹಾಗೂ ಇತರೆ ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್ ಹಾಗೂ ಮೇಲ್ಕಂಡ ವಿಳಾಸದ ಜಿಲ್ಲಾ ಕಛೇರಿಯನ್ನು ಸಂಪರ್ಕಿಸುವಂತೆ ತಿಳಿಸಿದೆ.

## ಕಂದಾಯ ಸಚಿವರಾದ ಆರ್. ಅಶೋಕ್ ಅವರಿಂದ ಪ್ರತಿಜ್ಞಾವಿಧಿ ಭೋಧನೆ

ಬೆಂಗಳೂರು, ನವೆಂಬರ್ 19 (ಕರ್ನಾಟಕ ಸರ್ಕಾರ):

ರಾಷ್ಟ್ರೀಯ ಐಕ್ಯತಾ ಸಪ್ತಾಹದ ಅಂಗವಾಗಿ ಕಂದಾಯ ಸಚಿವರಾದ ಆರ್. ಅಶೋಕ್ ಅವರು ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನವನ್ನು ಬೊಧಿಸಿದರು.

ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸಚಿವರು ಪ್ರಮಾಣ ವಚನ ಬೊಧಿಸಿದರು.

ಇದೇ ಸಂದರ್ಭದಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಶ್ರೀಮತಿ ವಂದಿತಾ ಶರ್ಮಾ, ಆಡಳಿತ ಮತ್ತು ಸುಧಾರಣಾ ಇಲಾಖೆಯ ಪ್ರಧಾನ

ಕಾರ್ಯದರ್ಶಿ ಶ್ರೀಮತಿ ಹೇಮಲತಾ, ಹಿರಿಯ ಅಧಿಕಾರಿಗಳಾದ ತುಷಾರ್ ಗಿರಿನಾಥ್ ಸೇರಿದಂತೆ ಸಚಿವಾಲಯದ ಇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ನವೆಂಬರ್ 21 ರಂದು 'ಮತ್ಸ ಸಂಪದ ಯೋಜನೆ' ಗೆ ಸಿಎಂ ಚಾಲನೆ

ಬೆಂಗಳೂರು, ನವೆಂಬರ್ 19 (ಕರ್ನಾಟಕ ಸರ್ಕಾರ):

ಇದೇ ನವೆಂಬರ್ 21 ರಂದು 'ಮತ್ಸ ಸಂಪದ ಯೋಜನೆ' ಹಾಗೂ ಕಾರ್ಯಾಗಾರವನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಉದ್ಘಾಟಿಸಲಿದ್ದಾರೆ ಎಂದು ಮೀನುಗಾರಿಕೆ ಮತ್ತು ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವರಾದ ಕೋಟ ಶ್ರೀನಿವಾಸ ಪೂಜಾರಿ ತಿಳಿಸಿದರು.

ಇಂದು ವಿಧಾನಸೌಧದಲ್ಲಿರುವ ತಮ್ಮ ಕಚೇರಿಯಲ್ಲಿ ಈ ಕುರಿತು ಹಮ್ಮಿಕೊಳ್ಳಲಾದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.

ಒಳನಾಡು ಮೀನುಗಾರಿಕೆಯಲ್ಲಿ ದೇಶದಲ್ಲೇ ಕರ್ನಾಟಕ 9ನೇ ಸ್ಥಾನದಲ್ಲಿದ್ದು, ಸಮುದ್ರ ಕಾನಾರೆ ಮೀನುಗಾರಿಕೆಯಲ್ಲಿ 4ನೇ ಸ್ಥಾನದಲ್ಲಿದೆ. ಇದರಲ್ಲಿ ಪ್ರಥಮ ಸ್ಥಾನ ಪಡೆಯುವುದು ನಮ್ಮ ಗುರಿಯಾಗಿದೆ ಎಂದರು.

ನವೆಂಬರ್ 21ರ ಕಾರ್ಯಾಗಾರದಲ್ಲಿ ಮೀನಿನ ಖಾದ್ಯಗಳಾದ ಚಿಪ್ಸಿ ಇತ್ಯಾದಿಗಳನ್ನು ಪರಿಚಯಿಸಲಾಗುವುದು.

ಮಂಗಳೂರಿನಲ್ಲಿ ಮೀನುಗಾರಿಕೆ ಕಾಲೇಜನ್ನು ವಿಶ್ವವಿದ್ಯಾಲಯವನ್ನಾಗಿ ಮಾಪಾಟು ಮಾಡಲಾಗುವುದು. ರಾಜ್ಯದ ಶಿವಮೊಗ್ಗ, ಅಂಕೋಲ, ಮೈಸೂರು, ಉಡುಪಿ ಮುಂತಾದ ಕಡೆ ಮೀನುಗಾರಿಕೆ ಕಾಲೇಜಗಳನ್ನು ಸ್ಥಾಪಿಸಲಾಗುವುದು ಹಾಗೂ ಇತರ 10 ಕಡೆ ಡಿಪ್ಲೋಮಾ ತರಗತಿಗಳನ್ನು ಸಹ ಪ್ರಾರಂಭಿಸಲಾಗುವುದೆಂದರು.

ಹೇಸರಘಟ್ಟದಲ್ಲಿರುವ ಮೀನುಗಾರಿಕೆ ಸಾಕಣಿಕೆ ಕೇಂದ್ರದಲ್ಲಿ 1 ಕೋಟಿ ವೆಚ್ಚದಲ್ಲಿ ಮೀನು ಕ್ವಾರಂಟೈನ್ ಕೇಂದ್ರ ಸ್ಥಾಪಿಸಲಾಗಿದೆ. ಇಲ್ಲಿ ವಿದೇಶದ ಬಣ್ಣದ ಮೀನನ್ನು ಸಾಕಣೆಯನ್ನು ಮಾಡಲಾಗುವುದು. ಮೀನುಗಳನ್ನು ವಿದೇಶದಿಂದ ಆಮದು ಮಾಡಿ ಅವನ್ನು ಒಂದು ವಾರ

ಪ್ರತ್ಯೇಕವಾಗಿಟ್ಟು, ರೋಗ ಮುಕ್ತವೆಂದು ನಿರ್ಧರಿಸಿದ ನಂತರ ಸಾಕಣೆ ಮಾಡಲಾಗುವುದು. ಈ ವ್ಯವಸ್ಥೆ ಚನ್ನೈನಲ್ಲಿ ಮಾತ್ರವಿದ್ದು, ಈಗ ನಮ್ಮಲ್ಲೂ ವಿಸ್ತರಣೆಗೊಂಡಿದೆ.

ಮೀನನ್ನು ಆನ್‌ಲೈನ್ ಮೂಲಕ ಸಹ ಮನೆಗಳಿಗೆ ಸರಬರಾಜು ಮಾಡುವ ಯೋಜನೆ ಇಲಾಖೆ ಮುಂದಿದೆ. 2020-21 ನೇ ಸಾಲಿಗೆ ರಾಜ್ಯಕ್ಕೆ 137.20 ಕೋಟಿ ಯೋಜನಾ ಕಾರ್ಯಕ್ರಮಗಳನ್ನು ಕೇಂದ್ರ ಸರ್ಕಾರದ ಮಂಜೂರು ಮಾಡಿದ್ದು, ಇದರ ಅನುಷ್ಠಾನಕ್ಕೆ ಇಲಾಖೆ ಕ್ರಮವಹಿಸಿದೆ. ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಮುಂದಿನ 5 ವರ್ಷಗಳಿಗೆ ಕರ್ನಾಟಕ ರಾಜ್ಯದಿಂದ ಅಂದಾಜು ರೂ 4115 ಕೋಟಿ ಕ್ರಿಯಾ ಯೋಜನೆ ತಯಾರಿಸಿ ಸಲ್ಲಿಸಲಾಗಿದೆ ಎಂದರು.

ಕೇಂದ್ರದ ಆತ್ಮನಿರ್ಭರ ಯೋಜನೆಯಡಿ ಸುಮಾರು 10,000 ಯುವಕರಿಗೆ ಇಲಾಖೆಯಿಂದ ರಾಜ್ಯದ ವಿವಿದೆಡೆ ಉದ್ಯೋಗ ಕಲ್ಪಿಸಲಾಗಿದೆ ಎಂದರು.

## ಕರಡು ಮತದಾರರ ಪಟ್ಟಿ

ಬೆಂಗಳೂರು, ನವೆಂಬರ್ 19 (ಕರ್ನಾಟಕ ಸರ್ಕಾರ):

ಭಾರತ ಚುನಾವಣಾ ಆಯೋಗದ ನಿರ್ದೇಶಗಳನ್ವಯ ಕರ್ನಾಟಕ ರಾಜ್ಯದ 224 ವಿಧಾಸಭಾ ಕ್ಷೇತ್ರಗಳಲ್ಲಿ ಮತದಾರರ ಪಟ್ಟಿಗಳ ವಿಶೇಷ ಪರಿಷ್ಕರಣೆ ಕಾರ್ಯಕ್ರಮ ಅರ್ಹತಾ ದಿನಾಂಕ: 01-01-2021 ರಡಿ ಮತದಾರರ ಪಟ್ಟಿಗಳನ್ನು ಪರಿಷ್ಕರಿಸಲಾಗುತ್ತಿದ್ದು, ಇಂದು ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲಿ ಕರಡು ಮತದಾರರ ಪಟ್ಟಿಗಳನ್ನು ಜಿಲ್ಲಾಧಿಕಾರಿಗಳ ಕಛೇರಿ, ಮತದಾರರ ನೋಂದಣಾಧಿಕಾರಿಗಳ ಕಛೇರಿ, ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಛೇರಿ ಹಾಗೂ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮತಗಟಗಟ್ಟೆಗಳಲ್ಲಿ ಸಾರ್ವಜನಿಕರ ತಿಳುವಳಿಕೆಗಾಗಿ ಪ್ರಕಟಪಡಿಸಿದೆ.

ಕರಡು ಮತದಾರರ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದ್ದು ಹೆಸರು ಸೇರ್ಪಡೆ, ತಿದ್ದುಪಡಿ ಮಾಡಲು ಮತ್ತು ತೆಗೆದು ಹಾಕಲು ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸುವ ಅವಧಿ 17-12-2020(ಗುರುವಾರ) ರವರೆಗೆ ಇರುತ್ತದೆ.

ವಿಶೇಷ ಪ್ರಚಾರ ದಿನಾಂಕಗಳು 22-11-2020(ಭಾನುವಾರ), 29-11-2020(ಭಾನುವಾರ), 06-12-2020(ಭಾನುವಾರ), 13-12-2020(ಭಾನುವಾರ)

ಹೆಸರು ಸೇರ್ಪಡೆ, ತಿದ್ದುಪಡಿ ಮಾಡಲು ಮತ್ತು ತೆಗೆದು ಹಾಕಲು ಸ್ವೀಕೃತವಾಗಿರುವ ಅರ್ಜಿಗಳನ್ನು ಇತ್ಯರ್ಥಗೊಳಿಸುವ ಕೊನೆಯ ದಿನಾಂಕ 07–01–2021(ಗುರುವಾರ). ಡೇಟಾ ಬೇಸ್ ಕಾಲೋಚಿತಗೊಳಿಸಿ ಪೂರಕ ಪಟ್ಟಿಗಳ ಮುದ್ರಣದ ದಿನಾಂಕ 14–01–2021(ಗುರುವಾರ). ಭಾವಚಿತ್ರವಿರುವ ಮತದಾರರ ಪಟ್ಟಿಗಳ ಅಂತಿಮ ಪ್ರಕಟಣೆಯ ದಿನಾಂಕ 18–01–2021(ಸೋಮವಾರ).

ಮೇಲ್ಕಾಣಿಸಿದಂತೆ ಮತದಾರರ ಪಟ್ಟಿಗಳ ಪರಿಷ್ಕರಣೆಯನ್ನು ಕೈಗೊಳ್ಳುತ್ತಿದ್ದು, ಈ ಕೆಳಗಿನ ಅಂಶಗಳ ಬಗ್ಗೆ ರಾಜಕೀಯ ಪಕ್ಷಗಳ ಸಹಕಾರವನ್ನು ಕೋರಿದೆ.

ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಯನ್ನು ಮುಖ್ಯ ಚುನಾವಣಾಧಿಕಾರಿಗಳು, ಕರ್ನಾಟಕ ರಾಜ್ಯ ಇವರ ಅಧಿಕೃತ ಜಾಲತಾಣ www.ceokarnataka.kar.nic.in ನಲ್ಲಿ ಪಿ.ಡಿ.ಎಫ್. ಆವೃತ್ತಿಯನ್ನು ಹಾಕಲಾಗಿದ್ದು, ಸಾರ್ವಜನಿಕರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾದ ಬಗ್ಗೆ ಪರಿಶೀಲಿಸುವುದು ಹಾಗೂ ಸರಿಯಾದ ಹೆಸರನ್ನು ನಮೂದುಗಳೊಂದಿಗೆ ನೋಂದಾಯಿಸಿದ ಬಗ್ಗೆ ಖಚಿತಪಡಿಸಿಕೊಳ್ಳುವುದು.

ಅರ್ಜಿ ಸಲ್ಲಿಸುವ ವಿಧಾನ:

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ನೇಮಕವಾಗಿರುವ ಅಧಿಸೂಚಿತ ಮತದಾರರ ನೋಂದಣಾಧಿಕಾರಿಗಳು/ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ ನಿಗದಿತ ನಮೂನೆಗಳಲ್ಲಿ ಅವಶ್ಯಕ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬೇಕು.

ನಮೂನೆ–6–ಹೆಸರು ಸೇರ್ಪಡೆ, ನಮೂನೆ–7–ಹೆಸರು ತೆಗೆದುಹಾಕುವಿಕೆ, ನಮೂನೆ–8–ಮುದ್ರಿತ ನಮೂದುಗಳಲ್ಲಿ ತಿದ್ದುಪಡಿಗಳು, ನಮೂನೆ 8A-ಅದೇ ವಿಧಾನಸಭಾ ಕ್ಷೇತ್ರದಲ್ಲಿ ಒಂದು ಮತಗಟ್ಟೆಯ ವ್ಯಾಪ್ತಿಯಿಂದ ಇನ್ನೊಂದು ಮತಗಟ್ಟೆಗೆ ಹೆಸರು ವರ್ಗಾವಣೆ(Transposition)

ಮತದಾರರ ಪಟ್ಟಿಗಳ ಪರಿಷ್ಕರಣೆಯ ವೇಳಾಪಟ್ಟಿಯ ಬಗ್ಗೆ ಸಾಕಷ್ಟು ಪ್ರಚಾರ ನೀಡಲಾಗಿದ್ದು, ರಾಜ್ಯ ಮಟ್ಟದಲ್ಲಿ ಮುಖ್ಯ ಚುನಾವಣಾಧಿಕಾರಿಗಳು, ಕರ್ನಾಟಕ ರವರು ಪತ್ರಿಕಾ ಪ್ರಕಟಣೆ ಮೂಲಕ ಸವಿಸ್ತಾರವಾಗಿ ವಿವರಿಸಿರುತ್ತಾರೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದಲ್ಲಿ ಆಯಾ ತಹಶೀಲ್ದಾರರು ಮಾಧ್ಯಮದ ಪ್ರಚಾರ ಕೈಗೊಳ್ಳುತ್ತಾರೆ. ಅಲ್ಲದೇ ಅವಶ್ಯಕ ಎಲ್ಲಾ ಅರ್ಜಿ ನಮೂನೆಗಳು ಆಯಾ ಮತದಾರರ ನೋಂದಣಾಧಿಕಾರಿಗಳ

ಕಾರ್ಯಾಲಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದ್ದು, ಸಾರ್ವಜನಿಕರು ಉಚಿತವಾಗಿ ನೀಡುವ ಅರ್ಜಿಗಳನ್ನು ಅವಶ್ಯಕತೆಗೆ ಅನುಸಾರವಾಗಿ ಪಡೆಯಲು ಕೋರಲಆಗಿದೆ.

ಮತದಾರರ ಸೇರ್ಪಡೆ, ತಿದ್ದುಪಡಿ ಹಾಗೂ ತೆಗೆದುಹಾಕುವಿಕೆ.

ಎಲ್ಲಾ ಅರ್ಹ ವಕ್ತಿಗಳನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಬೇಕಾಗಿದ್ದು, ಈ ದಿಶೆಯಲ್ಲಿ ವಿಶೇಷವಾಗಿ 18–19 ವಯಸ್ಸಿನ ಯುವಕ/ಯುವತಿಯರ ಹೆಸರುಗಳನ್ನು ಪ್ರತಿಶತ 100% ರಂತೆ ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ಹೆಚ್ಚಿನ ಪ್ರಚಾರ ಕೈಗೊಳ್ಳಬೇಕಾಗುತ್ತದೆ.

ಅದರಂತೆ, ಮತದಾರರ ಪಟ್ಟಿಯಲ್ಲಿ ನೋಂದಣಿಯಾಗಿರುವ ಮತದಾರರು ಮೃತರಾಗಿದ್ದಲ್ಲಿ/ವಲಸೆ ಹೋಗಿದ್ದಲ್ಲಿ/ಎರಡು ಕಡೆ ಹೆಸರುಗಳು ಇದ್ದಲ್ಲಿ ಅಂತಹ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು ಕ್ರಮ ಜರುಗಿಸಬೇಕಾಗುತ್ತದೆ.

ಮತದಾರರ ನೋಂದಣಿ ಆದ ಮತದಾರರ ವಿವರಗಳು/ನಮೂದುಗಳು ತಪ್ಪಾಗಿದ್ದಲ್ಲಿ ಅವುಗಳನ್ನು ತಿದ್ದುಪಡಿ ಮೂಲಕ ಸರಿಪಡಿಸುವುದು.

ಎಲ್ಲಾ ಅರ್ಹ ಮತದಾರರಿಗೆ ಗುರುತಿನ ಚೀಟಿ:

ಪ್ರಜಾ ಪ್ರಾತಿನಿಧ್ಯ ಕಾಯ್ದೆ ಹಾಗೂ ಮತದಾರರ ನೋಂದಣಿ ನಿಯಮಾವಳಿಗಳನ್ವಯ ಎಲ್ಲಾ ಅರ್ಹ ಮತದಾರರಿಗೆ ಭಾವಚಿತ್ರವಿರುವ ಗುರುತಿನ ಚೀಟಿಗಳನ್ನು ನೀಡಲಾಗಿದ್ದು, ಪ್ರಸ್ತುತ ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮ ಅರ್ಹತಾ ದಿನಾಂಕ 01–01–2021ರಡಿ ಹೊಸದಾಗಿ ಸೇರ್ಪಡೆಯಾಗಿರುವ ಎಲ್ಲಾ ಮತದಾರರಿಗೆ ಭಾವಚಿತ್ರವಿರುವ ಗುರುತಿನ ಚೀಟಿಗಳನ್ನು ನೀಡಲಾಗುವುದು.

ಮುಂಬರುವ ಚುನಾವಣೆಗಳ ನಿಮಿತ್ತ ಎಲ್ಲಾ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಲು ಹಾಗೂ ದೋಷರಹಿತ ಮತದಾರರ ಪಟ್ಟಿಯನ್ನು ತಯಾರಿಸಲು ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಅವಶ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮತದಾರರ ಪಟ್ಟಿಗಳು/ಮತದಾರರ ಗುರುತಿನ ಚೀಟಿ ಇತ್ಯಾದಿ ವಿವರಗಳ ಮಾಹಿತಿ ಅವಶ್ಯವಿದ್ದಲ್ಲಿ ಸಂಬಂಧಪಟ್ಟ ಜಿಲ್ಲಾ ಚುನಾವಣಾಧಿಕಾರಿಗಳು/ಮತದಾರರ ನೋಂದಣಾಧಿಕಾರಿಗಳು/ಸಹಾಯಕ ಮತದಾರರ ನೋಂದಣಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

# ಸಾರ್ವಜನಿಕ ಗ್ರಂಥಾಲಯ ಪುಸ್ತಕ ಪ್ರದರ್ಶನ

**ಬೆಂಗಳೂರು, ನವೆಂಬರ್ 19 (ಕರ್ನಾಟಕ ಸರ್ಕಾರ):**

2018ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಏಕಗವಾಕ್ಷಿ ಯೋಜನೆಯಡಿಯಲ್ಲಿ ಮತ್ತು 2020ರಲ್ಲಿ ಪ್ರಥಮ ಮುದ್ರಣಗೊಂಡ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿಯಲ್ಲಿ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸ್ವೀಕರಿಸಿದ ಪುಸ್ತಕಗಳನ್ನು ಆಯ್ಕೆ ಸಮಿತಿಯ ಮುಂದೆ ಆಯ್ಕೆಗಾಗಿ ಮಂಡಿಸಲಾಗಿತ್ತು. ಆಯ್ಕೆ ಸಮಿತಿಯು ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದು, ಆಯ್ಕೆಯಾದ ಮತ್ತು ಆಯ್ಕೆಯಾಗದ ಕನ್ನಡಪುಸ್ತಕಗಳ ಪ್ರದರ್ಶನವನ್ನು "ಗ್ರಂಥಾಂಗಣ", ನಗರ ಕೇಂದ್ರ ಗ್ರಂಥಾಲಯ, ಪಶ್ಚಿಮ ವಲಯ, ಹಂಪಿನಗರ ಬೆಂಗಳೂರು ಇಲ್ಲಿ ದಿ: 24-11-2020ರಿಂದ ದಿ: 26-11-2020ರವರಗೆ ಏರ್ಪಡಿಸಲಾಗುವುದು.

ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸಲ್ಲಿಸಿದ ಪುಸ್ತಕಗಳ ಲೇಖಕರು, ಲೇಖಕ-ಪ್ರಕಾಶಕರು, ಪ್ರಕಾಶಕರು, ವಿತರಕರು ಮತ್ತು ಪುಸ್ತಕ ಮಾರಾಟಗಾರರು ಆಕ್ಷೇಪಣೆಗಳಿದ್ದಲ್ಲಿ ದಿನಾಂಕ: 30-11-2020ರಒಳಗಾಗಿ ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯಗೋಪುರ, 4ನೇ ಮಹಡಿ, ಡಾ:ಅಂಬೇಡ್ಕರ್ ವೀದಿ, ಬೆಂಗಳೂರು-560 001 ಇಲ್ಲಿಗೆ ಲಿಖಿತವಾಗಿ ಮನವಿಗಳನ್ನು ಸಲ್ಲಿಸಲು ಕೋರಿದೆ. ನಂತರ ಬಂದ ಮನವಿಗಳನ್ನು ಯಾವುದೇಕಾರಣಕ್ಕೂ ಪರಿಗಣಿಸಲಾಗುವುದಿಲ್ಲ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.